## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಮರಿಗೌಡ, ಮತ್ತು ಎಸ್.ಸಿ.ವೆಂಕಟಾಚಲಯ್ಯ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರಗಳು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ ಮದ್ದೂರು(ನಿವೃತ್ತ), ಇವರ ವಿರುದ್ಧದ ಜಂಟಿ ಇಲಾಖಾ ವಿಚಾರಣೆಗೊಳ್ಳುವ ಬಗ್ಗೆ.

ಓದಲಾಗಿದೆ:- ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರ ಪತ್ರ ಸಂಖ್ಯೆ:/ಪಂರಾಇಂಇ/ಸಿ-11/25/2015 ದಿನಾಂಕ: 08.11.2017.

****

**ಪ್ರಸ್ತಾವನೆ:**

ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ದಿನಾಂಕ: 08.11.2017ರ ಪತ್ರದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಮದ್ದೂರು ಇಲ್ಲಿನ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸದಿದ್ದರೂ ಇಬ್ಬರು ವಾಹನ ಚಾಲಕರಿಗೆ ವೇತನ ಪಾವತಿ ಮಾಡಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವ ಶ್ರೀ ಪಿ.ಗೋಪಾಲ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ ಮದ್ದೂರು, ಹಾಗೂ ಪ್ರಕರಣದಲ್ಲಿ ಭಾಗಿಯಾಗಿರುವ ಇನ್ನಿತರ ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಅದರಂತೆ, ಸದರಿ ಪ್ರಕರಣದಲ್ಲಿ ಭಾಗಿಯಾಗಿರುವ ಒಟ್ಟು 6 ಅಧಿಕಾರಿ/ನೌಕರರ ಪೈಕಿ ಶ್ರೀ ಮರಿಗೌಡ, ಮತ್ತು ಎಸ್.ಸಿ.ವೆಂಕಟಾಚಲಯ್ಯ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ ಮದ್ದೂರು , ಇವರುಗಳು ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ, ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸದರಿ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 13 ರನ್ವಯ ಜಂಟಿ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 76 ಇಎನ್‌ಕ್ಯೂ 2018 ಬೆಂಗಳೂರು ದಿನಾಂಕ: 29.11.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳು 214ನೇ ನಿಯಮದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರವು ಶ್ರೀ ಮರಿಗೌಡ, ಹಾಗೂ ಶ್ರೀ ಎಸ್.ಸಿ.ವೆಂಕಟಾಚಲಯ್ಯ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು (ನಿವೃತ್ತ) ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಮದ್ದೂರು ಇವರ ವಿರುದ್ಧ ಆರೋಪಗಳ ಕುರಿತು ಇಲಾಖಾ ವಿಚಾರಣೆ ನಡೆಸಬೇಕೆಂದು, ಈ ವಿಚಾರಣೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು-1957ರ ನಿಯಮ 11 ಮತ್ತು 11ಎ ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನವನ್ನು ಅನುಸರಿಸಬೇಕೆಂದು ಈ ಮೂಲಕ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

29/11/2018

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)

2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, (ಸೇವೆಗಳು-ಎ&ಸಿ) ವಿಕಾಸಸೌಧ ಬೆಂಗಳೂರು.
7. ಸಂಬಂಧಪಟ್ಟ ಅಧಿಕಾರಿಗಳಿಗೆ
8. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
9. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
10. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.